ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :10/3/2021

# ಸಿಎಂ-ಯತ್ನಾಳ್ ನೇರ ಚರ್ಚೆ

- **ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ವಿಚಾರ**
- **ಕುಳಿತು ಮಾತನಾಡೋಣ ಎಂದ ಮುಖ್ಯಮಂತ್ರಿಗಳು**

ಬೆಂಗಳೂರು: ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ನೀಡುವ ವಿಚಾರದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಗೂ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮುಖಾಮುಖಿ ಭೇಟಿಯಾಗಿ ಮಾತನಾಡಿದ್ದಾರೆ.

ವಿಧಾನಸಭೆಯ ಮೊಗಸಾಲೆಯಲ್ಲಿ ವಿಧಾನಸಭಾಧ್ಯಕ್ಷರ ಕಚೇರಿ ಹಿಂಭಾಗದಲ್ಲಿ ಇಬ್ಬರೂ ನಾಯಕರು ಮುಖಾಮುಖಿಯಾಗಿದ್ದು, ಆ ಸಂದರ್ಭದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಶಾಸಕ ಬಸನಗೌಡ ಪಾಟೀಲ್ ಯತ್ನಾಳರನ್ನು ಆತ್ಮೀಯತೆಯಿಂದಲೇ ಕರೆದು ಮಾತನಾಡಿಸಿ, ಮೀಸಲಾತಿ ವಿಚಾರದಲ್ಲಿ ನಾನು ಏನ್ ಮಾಡಬೇಕು ಹೇಳು ಎಂದು ಪ್ರಶ್ನಿಸಿದ್ದಾರೆ.

ಆದಕ್ಕೆ ಬಸನಗೌಡ ಪಾಟೀಲ್ ಯತ್ನಾಳ್, ಮೀಸಲಾತಿ ನೀಡುವುದು ನಿಮ್ಮ ಕೈಯಲ್ಲಿಯೇ ಇದೆ. ಬೇಕಿದ್ದರೆ ಹೇಗೆ ಮಾಡಬಹುದು ಎನ್ನುವುದನ್ನು ನಾನು ಹೇಳುತ್ತೇನೆ. ನೀವೇ ಮಾಡಬೇಕು ಎಂದು ಹೇಳಿದ್ದಾರೆ. ಅಲ್ಲದೇ ವೀರಶೈವ ಲಿಂಗಾಯತ ಬಣಜಿಗ ಸಮುದಾಯದವರಿಗೆ 2ಎ ಮೀಸಲಾತಿ ನೀಡಿದಂತೆ ಪಂಚಮಸಾಲಿ ಸಮುದಾಯಕ್ಕೂ ಮೀಸಲಾತಿ ನೀಡಬಹುದು ಎಂದು ಸಲಹೆ ನೀಡಿದ್ದಾರೆ. ಅವರ ಮಾತಿಗೆ ಈ ಕುರಿತು ಇಬ್ಬರೂ ಕೂಡಿ ಕುಳಿತು ಚರ್ಚಿಸಿ ಮಾತನಾಡೋಣ ಎಂದು ಸಿಎಂ ಯಡಿಯೂರಪ್ಪ ಹೇಳಿದ್ದಾರೆ.

ಇದಕ್ಕೂ ಮುನ್ನ ಬಸನಗೌಡ ಪಾಟೀಲ್ ಯತ್ನಾಳ್, ವಿಧಾನಸಭೆಯಲ್ಲಿ ಪಂಚಮಸಾಲಿ ಮೀಸಲಾತಿ ಕುರಿತು ಚರ್ಚೆಗೆ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದ್ದರು. ಆದರೆ, ಸ್ಪೀಕರ್ ಕಾಗೇರಿ ಅವರು ಒಪ್ಪಲಿಲ್ಲ, ಬುಧವಾರ ಅವಕಾಶ ಕೊಡುವುದಾಗಿ ಹೇಳಿದರು. ಇದಕ್ಕೆ ಯತ್ನಾಳ್ ಆಕ್ಷೇಪ ಎತ್ತಿದರಾದರೂ, ಸ್ಪೀಕರ್ ಅವರು ಬುಧವಾರವೇ ಚರ್ಚೆ ನಡೆಸುವ ಬಗ್ಗೆ ಹೇಳಿದರು.